ಕರ್ನಾಟಕ ಸರಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ ಯಾದಗಿರಿ ಜಿಲ್ಲೆ – ಯಾದಗಿರಿ

## 2022 ನೇ ಸಾಲಿಗಾಗಿ

# ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ

**ಜಿಲ್ಲಾಧಿಕಾರಿಗಳ ಕಛೇರಿ,**

**ಜಿಲ್ಲಾ ಆಡಳಿತ ಭವನ ಯಾದಗಿರಿ ಜಿಲ್ಲೆ**

**ಯಾದಗಿರಿ**

**********

# ಗ್ರಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ – 2022

# ಯಾದಗಿರಿ ಜಿಲ್ಲೆ ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆ ವೇಳಾ ಪಟ್ಟಿ

[ Calender of Events]

| ಕ್ರ ಸಂ | ವಿವರ | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ | 29-03-2022 |
| 2 | ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ (ಪ್ರಾರಂಭ ದಿನಾಂಕ) | 31-03-2022 |
| 3 | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 29-04-2022 |
| 4 | ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಲು ನಿಗದಿತ ಕೊನೆಯ ದಿನಾಂಕ | 02-05-2022 |
| 5 | ಜಿಲ್ಲಾಧಿಕಾರಿಗಳು ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ (1:5) | 09-05-2022 |
| 6 | ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕ.(ಪ್ರಾರಂಭ ದಿನಾಂಕ) | 09-05-2022 |
| 7 | ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ. | 16-05-2022 |
| 8 | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರು ಆಗಬೇಕಾದ ದಿನಾಂಕ ಮತ್ತು ಸಮಯ | 20-05-2022 |
| 9 | ಜಿಲ್ಲಾಧಿಕಾರಿಗಳ ಕಛೇರಿಯು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮತ್ತು ಕಾಯ್ದಿರಿಸಿದ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ. | 25-05-2022 |
| 10 | ತಾತ್ಕಾಲಿಕ ಆಯ್ಕೆ ಪಟ್ಟಿ ಮತ್ತು ಕಾಯ್ದಿರಿಸಿದ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ನಿಗದಿಪಡಿಸಿದ ದಿನಾಂಕ(ಪ್ರಾರಂಭ ದಿನಾಂಕ) | 25-05-2022 |
| 11 | ತಾತ್ಕಾಲಿಕ ಆಯ್ಕೆ ಪಟ್ಟಿ ಮತ್ತು ಕಾಯ್ದಿರಿಸಿದ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ. | 31-05-2022 |
| 12 | ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಬೇಕಾದ ದಿನಾಂಕ. | 06-06-2022 |
| 13 | ವೆಬ್ ಸೈಟ್ ವಿಳಾಸ. | http://yadgir-va.kar.nic.in |
| 14 | ಸ್ಪಷ್ಟೀಕರಣ/ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | 08473-252703 |

ಜಿಲ್ಲಾಧಿಕಾರಿಗಳು
ಯಾದಗಿರಿ

ಕಂದಾಯ ಇಲಾಖೆ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಯಾದಗಿರಿ.

**ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಯಾದಗಿರಿ**

ಸಂಖ್ಯೆ:ಕಂದಾಯ/ಸಿಬ್ಬಂದಿ-1/161/2021-22/ ದಿನಾಂಕ:25/03/22

ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ಕೊನೆಯ ದಿನಾಂಕ:29-04-2022 ಸಂಜೆ:05:00ಘಂಟೆವರೆಗೆ

## -: ಅಧಿಸೂಚನೆ :-

ಯಾದಗಿರಿ ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ನಾಗರೀಕ ಸೇವೆಗಳು [ Revenue Subordinate Branch] [Cadre & Recruitment ][Amendment] ನಿಯಮಗಳು 2008 ನಿಯಮ 2 ರ ಅನ್ವಯ ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ:ಕಂ.ಇ/04/ಬಿ.ಎಸ್.ಸಿ./2011 ದಿನಾಂಕ:25.02.2011 ಮತ್ತು ಸರಕಾರದ ಪತ್ರ ಸಂಖ್ಯೆ ಸಿಆಸುಇ/91/ಹೈಕಕೋ/2014 ದಿನಾಂಕ 06/12/2014 ಮತ್ತು ಪತ್ರ ಸಂಖ್ಯೆ/ಕಂಇ/32/ಬಿಎಸ್‌ಐ/2015 ದಿನಾಂಕ 02/03/2015ರಲ್ಲಿ ನಿರ್ದೇಶಿಸಲಾಗಿರುತ್ತದೆ. ಅದರಂತೆ ಗ್ರಾಮಲೆಕ್ಕಿಗರ ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಅಹ್ವಾನಿಸಲಾಗಿದೆ.

ಭರ್ತಿ ಮಾಡಲು ಉದ್ದೇಶಿಸಿರುವ ಗ್ರಾಮಲೆಕ್ಕಿಗ ಹುದ್ದೆಗಳ ಒಟ್ಟು ಸಂಖ್ಯೆ-27

[ಹೈದ್ರಾಬಾದ-ಕರ್ನಾಟಕ ಪ್ರದೇಶದವರಿಗೆ ಮೀಸಲಿರಿಸಿದ ಹುದ್ದೆಗಳು – 27]

ಗ್ರಾಮಲೆಕ್ಕಿಗರ ಖಾಲಿ ಇರುವ ಹುದ್ದೆಗಳ ವಿವರ ಕೆಳಗಿನಂತಿವೆ.

ಹುದ್ದೆಗಳ ವರ್ಗೀಕರಣ

[ರೋಸ್ಟರ್ ಬಿಂದು 34 ರಿಂದ ಪ್ರಾರಂಭಿಸಲಾಗಿದೆ ಕೊನೆಯ ರೋಸ್ಟರ್ 60 ರವರೆಗೆ -27 ಹುದ್ದೆಗಳು]

| ಕ್ರ. ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪ್ರ.ವರ್ಗ-1 | 0 | 1 | 0 | 0 | 0 | 0 | 0 | 1 |
| 2 | ಪ್ರವರ್ಗ-2ಎ | 1 | 1 | 1 | 1 | 0 | 0 | 0 | 4 |
| 3 | ಪ್ರವರ್ಗ-2ಬಿ | 1 | 0 | 0 | 0 | 0 | 0 | 0 | 1 |
| 4 | ಪ್ರ.ವರ್ಗ-3ಎ | 0 | 0 | 1 | 0 | 0 | 0 | 0 | 1 |
| 5 | ಪ್ರ.ವರ್ಗ-3ಬಿ | 1 | 0 | 0 | 0 | 0 | 0 | 0 | 1 |
| 6 | ಪ.ಜಾ | 1 | 1 | 1 | 1 | 0 | 0 | 0 | 4 |
| 7 | ಪ.ಪಂ | 1 | 0 | 0 | 0 | 0 | 0 | 0 | 1 |
| 8 | ಸಾಮಾನ್ಯ | 3 | 4 | 4 | 1 | 2 | 0 | 0 | 14 |
| ಒಟ್ಟು | | 8 | 7 | 7 | 3 | 2 | 0 | 0 | 27 |



ಜಿಲ್ಲಾಧಿಕಾರಿಗಳು
ಯಾದಗಿರಿ

1) ಅರ್ಜಿ ಸಲ್ಲಿಸುವ ವಿಧಾನ:- ಅರ್ಜಿಗಳನ್ನು ಆನ್-ಲೈನ್ [ On line ] [ಎಲೆಕ್ಟ್ರಾನಿಕ್ ಮಾರ್ಗ] ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

2) ಅರ್ಜಿ ಶುಲ್ಕ:-

| | | |
|---|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರ.ವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿ | 25-00 | ಬ್ಯಾಂಕ್ ಶುಲ್ಕವನ್ನು ಅಭ್ಯರ್ಥಿಗಳು ಪ್ರತ್ಯೇಕವಾಗಿ ಭರಿಸತಕ್ಕದ್ದು. |
| 2ಎ, 2ಬಿ, 3ಎ, 3ಬಿ ವರ್ಗ ಹಾಗೂ ಮಾಜಿ ಸೈನಿಕ | 150-00 | |
| .ಸಾಮಾನ್ಯ ವರ್ಗ | 300-00 | |

3) ಆನ್-ಲೈನ್ [ On line ] [ಎಲೆಕ್ಟ್ರಾನಿಕ್ ಮಾರ್ಗ] ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:- ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://yadgir-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು ಹಾಗೂ ಇತ್ತೀಚಿನ ಭಾವ ಚಿತ್ರವನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು. ನಂತರ ಅಭ್ಯರ್ಥಿಯು **Submit Button** ಅನ್ನು ಒತ್ತಿದರೆ ಅರ್ಜಿ ಸಂಖ್ಯೆ [ **Reference Number**] ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ [ **Acknowledgement Slip**] ಮತ್ತು ದ್ವಿ ಪ್ರತಿ ಚಲನ್ ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ಅನ್ನು ನಿಗದಿತ ಅರ್ಜಿ ಶುಲ್ಕದೊಂದಿಗೆ ಕಡ್ಡಾಯವಾಗಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ, ಯಾವುದಾದರೂ ಶಾಖೆಯ, ಉಳಿತಾಯ ಖಾತೆ (ಎಸ್.ಬಿ.) ಅಕೌಂಟ್ ನಂ: 62186114470 IFSC Code: SBIN0020225 ಗೆ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್ ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು 20-05-2022 ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 02-05-2022 ಆಗಿರುತ್ತದೆ. (ನಿಗದಿತ ಅರ್ಜಿ ಶುಲ್ಕದೊಂದಿಗೆ ನಿಗದಿತ ಬ್ಯಾಂಕ್ ಶುಲ್ಕವನ್ನು ಸಹ ಪಾವತಿಸತಕ್ಕದ್ದು.) ನಗದು/ಡಿ.ಡಿ./ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ : 29-04-2022 ಒಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.

ಅ) ಅರ್ಜಿಗಳನ್ನು ದಿನಾಂಕ:31-03-2022 ರಿಂದ 29-03-2022 ರ ಒಳಗಾಗಿ ಸಲ್ಲಿಸತಕ್ಕದ್ದು.

ಆ) ಅರ್ಜಿ ಶುಲ್ಕವನ್ನು ದಿನಾಂಕ: 31-03-2022 ರಿಂದ 02-05-2022 ರ ವರೆಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಯಾದಗಿರಿ ಎಸ್.ಬಿ.ಖಾತೆ ಸಂಖ್ಯೆ:62186114470 IFSC Code No: **SBIN0020225** ಇದಕ್ಕೆ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು. ಹಾಗೂ ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಮೂಲಕ ತಂತ್ರಾಂಶದ ಸೂಚನೆಯನ್ನು ಪಾಲಿಸಿ ಸ್ಕ್ಯಾನ ಮಾಡಿದ ಚಲನ್ (ಬ್ಯಾಂಕಿನಲ್ಲಿ ಅರ್ಜಿ ಶುಲ್ಕ ಸಂದಾಯ ಮಾಡಿ ಬ್ಯಾಂಕ ಮೋಹರು ಹಾಕಲಾದ ಚಲನ್) ಅಪ್‌ಲೋಡ್ (**Uploading Challan Option**) ಮಾಡತಕ್ಕದ್ದು. ಇದು ಅಭ್ಯರ್ಥಿಯ ಜವಾಬ್ದಾರಿಯಾಗಿರುತ್ತದೆ. (ಅರ್ಜಿ ಶುಲ್ಕ ಪಾವತಿಸಿರುವ ಚಲನ್ ಅನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿದ್ದು, ಚಲನ್ ಅಪ್‌ಲೋಡ್ ಮಾಡದೇ ಇದ್ದಲ್ಲಿ ಅಂತಹ ಆನ್‌ಲೈನ್ ಅರ್ಜಿಯನ್ನು ತಿರಸ್ಕರಿಸಲಾಗುವುದು.

4) ಅರ್ಹತಾ ಷರತ್ತುಗಳು:-

ಅ] ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.

ಆ] ಅರ್ಜಿದಾರರು ಶೈಕ್ಷಣಿಕ ವಿದ್ಯಾರ್ಹತೆಯನ್ನು ಕರ್ನಾಟಕ ರಾಜ್ಯದಲ್ಲಿ ಪೂರೈಸಿರಬೇಕು.

ಇ] ಅರ್ಜಿದಾರರು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

ಈ] ಅಭ್ಯರ್ಥಿಯು ಈ ಹಿಂದೆ ಯಾವುದೇ ಸರ್ಕಾರದ ಸೇವೆಯಿಂದ ವಜಾಗೊಂಡಿರಬಾರದು.

5) ಶೈಕ್ಷಣಿಕ ವಿದ್ಯಾರ್ಹತೆ :-

ಪಿ.ಯು.ಸಿ. ಪರೀಕ್ಷೆ ಅಥವಾ **CBSE** ಅಥವಾ **ICSE** ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸಿರುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು. ಈ ವಿದ್ಯಾರ್ಹತೆ ಹೊರತುಪಡಿಸಿ ಇನ್ನಿತರ ಯಾವುದೇ ತತ್ಸಮಾನ ವಿದ್ಯಾರ್ಹತೆಗಳನ್ನು ಪರಿಗಣಿಸಲಾಗುವುದಿಲ್ಲ. ಆಯ್ಕೆಗೊಂಡ ಅಭ್ಯರ್ಥಿಗಳ ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಡಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

6) ವೇತನ ಶ್ರೇಣಿ:- ರೂ. 21400-500-22400-550-24600-600-27000-650-29600-750-32600-850-36000-950-39800-1100-42000

7) ವಯೋಮಿತಿ:- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ :29-04-2022 ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| ಕ್ರ.ಸಂ | ವಿ ವ ರ | ಕನಿಷ್ಠ | ಗರಿಷ್ಠ |
|---|---|---|---|
| 1 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರ.ವರ್ಗ-1 | 18 | 40 |
| 2 | ಪ್ರವರ್ಗ - 2ಎ. 2ಬಿ. 3ಎ. 3ಬಿ | 18 | 38 |
| 3 | ಸಾಮಾನ್ಯ ವರ್ಗದವರಿಗೆ | 18 | 35 |

ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ [ಟಿ.ಸಿ] ಅಥವಾ ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ. ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ]1977 ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ಸರ್ಕಾರಿ ಸೇವಾ [ಸಾಮಾನ್ಯ ನೇಮಕಾತಿ]1977 ರ ನಿಯಮಾವಳಿಗಳ ನಿಯಮ (6) ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

[ಎ]ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು, ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ [ಹತ್ತು] ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

[ಬಿ]ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

[ಸಿ]ಪೂರ್ಣಾವಧಿ ಕೆಡೆಟ್ ಇನ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರ್‌ರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು

[ಡಿ]ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ ಪೆಕ್ಟರ್ ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯು ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್ಸ್‌ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

[ಇ]ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು

[ಎಫ್]ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

[ಜಿ]ಅಭ್ಯರ್ಥಿ ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳು

[ಹೆಚ್]ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

8) ಹೈದ್ರಾಬಾದ-ಕರ್ನಾಟಕ ಪ್ರದೇಶದ ಮೀಸಲಾತಿ ಬಗ್ಗೆ :-

1. ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಒಳಪಡುವ ಬೀದರ, ಕಲಬುರಗಿ, ಯಾದಗಿರಿ, ರಾಯಚೂರ, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ (ಹೊಸಪೇಟೆ) ಜಿಲ್ಲೆಗಳ ಅಭ್ಯರ್ಥಿಗಳು ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಸಂವಿಧಾನದ ಅನುಚ್ಛೇದ 371(ಜೆ) ಅಡಿಯಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಕಂದಾಯ ಉಪ ವಿಭಾಗದ ಉಪವಿಭಾಗಾಧಿಕಾರಿಗಳು ನೀಡಿರುವ ಅರ್ಹತಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 29-04-2022 ರ ಒಳಗಾಗಿ ಪಡೆದಿರತಕ್ಕದ್ದು.

2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗೆ ಅಥವಾ ಮೀಸಲಿರಿಸಲಾರದ ಹುದ್ದೆಗೆ ಅರ್ಜಿ ಸಲ್ಲಿಸಿದ ಬಗ್ಗೆ ಕಡ್ಡಾಯವಾಗಿ ನಮೂದಿಸತಕ್ಕದ್ದು.

3. ಹೈದ್ರಾಬಾದ-ಕರ್ನಾಟಕ ಪ್ರದೇಶದವರಲ್ಲದ ಅಭ್ಯರ್ಥಿಗಳು ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

4. ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಒಳಪಡುವ ಅಭ್ಯರ್ಥಿಗಳು ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸದೇ ಹೈದ್ರಾಬಾದ-ಕರ್ನಾಟಕ ಪ್ರದೇಶದವರಿಗೆ ಹೊರತುಪಡಿಸಿ ಬೇರೆ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗೆ ಅರ್ಜಿ ಸಲ್ಲಿಸಿ ತದನಂತರ ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಾತಿ ಕೋರಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

5. ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, [ಅಧ್ಯಕ್ಷರು, ಹೈದ್ರಾಬಾದ ಕರ್ನಾಟಕ ಅರ್ಹತಾ ಪ್ರಮಾಣ ಪತ್ರ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

9) <u>ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:-</u>

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ತಹಶೀಲ್ದಾರ್ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿಗಳಿಂದ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

1. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ – ಡಿ ರಲ್ಲಿ [ ಅನುಭಂದ-1]
2. ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ ' ಇ ' ನಲ್ಲಿ [ ಅನುಬಂಧ-2]
3. ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ ' ಎಫ್ ' ನಲ್ಲಿ [ಅನುಬಂಧ-3]

   ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 29-04-2022 ರ ಒಳಗೆ ಪಡೆದಿರತಕ್ಕದ್ದು.
4. ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, [ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

10) <u>ಗ್ರಾಮೀಣ ಅಭ್ಯರ್ಥಿ:-</u>

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.

2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು. [ ಅನುಬಂಧ-4 ನಮೂನೆ-1 ಮತ್ತು 2]

<u>ಸೂಚನೆ:-</u> ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡಿದಿರತಕ್ಕದ್ದು.

ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 29-04-2022 ರ ಒಳಗೆ ಪಡೆದಿರತಕ್ಕದ್ದು.

11) <u>ಕನ್ನಡ ಮಾಧ್ಯಮ ಅಭ್ಯರ್ಥಿ:-</u>

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡಿದಿರತಕ್ಕದ್ದು [ ಅನುಬಂಧ-5] / ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 29-04-2022 ರ ಒಳಗೆ ಪಡೆದಿರತಕ್ಕದ್ದು.

12) <u>ಯೋಜನಾ ನಿರಾಶ್ರೀತ ಅಭ್ಯರ್ಥಿ:</u>

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. [ ಅನುಬಂಧ-6] / ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 29-04-2022ರ ಒಳಗೆ ಪಡೆದಿರತಕ್ಕದ್ದು.

13) <u>ಅಂಗವಿಕಲರ ಮೀಸಲಾತಿ ಬಗ್ಗೆ:-</u>

ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ನಿಯಮ 9[1-ಎ] ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/12/ಸೆನೆನಿ/2006 ದಿನಾಂಕ:1.8.2009 ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/52/ಎಸ್.ಎಸ್.ಆರ್/99 ದಿನಾಂಕ:29-11-2002 ಮತ್ತು ಸರಕಾರದ ಅಧಿಸೂಚನೆ ಸಂಖ್ಯೆ/ಡಿಪಿಎಆರ್/54/ಎಸ್ಆರ್‌ಪಿ/2012 ದಿನಾಂಕ 23/06/2012 ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1. ಕುಷ್ಟ ರೋಗದಿಂದ ಗುಣಮುಖರಾದವರು [ **Leprosy cured**]
2. ಶ್ರವಣ ದೋಷವುಳ್ಳವರು [**Hearing impaired**]
3. ಮಾನಸಿಕ ಅಸ್ವಸ್ಥತೆ [**Mentally ill** ]
4. ದೈಹಿತ ಅಂಗವಿಕಲತೆ ಉಳ್ಳವರು [**Locomotor Disability**]

ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ/128/ಸೆನೆನಿ/2005 ದಿನಾಂಕ:19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

ಸೂಚನೆ:- ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: 29-04-2022 ರೊಳಗೆ ಅರ್ಹತೆಯನ್ನು ಪಡೆದಿರಬೇಕು. ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಗೊಂಡ ಅಭ್ಯರ್ಥಿಗಳು ಮಾತ್ರ, ನಿಗದಿತ ದಿನಾಂಕ: 20-05-2022 ರಂದು ಪೂರ್ವಾಹ್ನ 10.30 ಗಂಟೆಗೆ ನೇಮಕಾತಿ ಪ್ರಾಧಿಕಾರದ ಎದುರು ಮೂಲ ಪ್ರಮಾಣ ಪತ್ರಗಳನ್ನು ತಪ್ಪದೇ ಹಾಜರು ಪಡಿಸತಕ್ಕದ್ದು. ಮೂಲ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆ ನೀಡದೇ ತಿರಸ್ಕೃತಗೊಳಿಸಲಾಗುವುದು.

14) ಆಯ್ಕೆ ವಿಧಾನ:-

ಕರ್ನಾಟಕ ಜನರಲ್ ಸರ್ವೀಸಸ್ [**[Revenue Subordinate Branch] [Cadre & Recruitment]** [ತಿದ್ದುಪಡಿ] ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಪರೀಕ್ಷೆ ಅಥವಾ **CBSE** ಅಥವಾ **ICSE** ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ [ **On merit]** ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 16-05-2022 ರಂದು ಪ್ರಕಟಿಸಲಾಗುವುದು.

15) ಪ್ರಮುಖ ಸೂಚನೆಗಳು:- ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ದಿನಾಂಕ: 20-05-2022 ರಂದು ಪರಿಶೀಲನೆಗೆ ಹಾಜರು ಪಡಿಸತಕ್ಕದ್ದು.

ಅ] ಪಿ.ಯು.ಸಿ. ಪರೀಕ್ಷೆ ಅಥವಾ **CBSE** ಅಥವಾ **ICSE** ನಡೆಸುವ 12 ನೇ ತರಗತಿ ಪರೀಕ್ಷೆಯ ಅಂಕ ಪಟ್ಟಿ ಪ್ರಮಾಣ ಪತ್ರ.

ಆ] ಹುಟ್ಟಿದ ದಿನಾಂಕದ ಪ್ರಮಾಣ ಪತ್ರ [ಎಸ್.ಎಸ್.ಎಲ್.ಸಿ/ಟಿ.ಸಿ. ಅಥವಾ ಕ್ಯುಮುಲೇಟಿವ್‌ರೆಕಾರ್ಡ್]

ಇ] ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿ ಇರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು

ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು [ No Objection Certificate]ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು. (ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/19/ಸೆನೆನಿ/2020 ದಿನಾಂಕ:12-10-2020 ರ ನಿಯಮ 11(3) ರಂತೆ ಹುದ್ದಗೆ ಆಯ್ಕೆಗೊಂಡ ನಂತರ ನೇಮಕಾತಿ ಆದೇಶ ಹೊರಡಿಸುವ ಮುನ್ನ ಪಡೆದಿರಬೇಕು)

[ಅನುಬಂಧ-7]

ಈ] ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ [ಅನುಬಂಧ-1 ನಮೂನೆ 'ಡಿ '] ಮತ್ತು ಪ್ರವರ್ಗ-1 [ಅನುಬಂಧ-2 ನಮೂನೆ 'ಇ'] ಹಾಗೂ ಪ್ರ ವರ್ಗ-2ಎ, 2ಬಿ, 3ಎ, 3ಬಿ [ಅನುಬಂಧ-3 ನಮೂನೆ – ಎಫ್] ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಉ] ಯೋಜನಾ ನಿರಾಶ್ರಿತ ಕುಟುಂಬದ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಊ] ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ.

ಋ] ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ

ೠ] ಸೈನಿಕ ಸೇವೆಯಿಂದ ಬಿಡುಗಡೆಯಾದ /ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ.

16) <u>ಸಾಮಾನ್ಯ ಸೂಚನೆಗಳು:-</u>

1. ನೈತಿಕ ದುರ್ನಡೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

2. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್ ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು

5. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

6. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.

7. ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೆ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

8. ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಜಿಲ್ಲಾಧಿಕಾರಿಗಳು ಯಾದಗಿರಿ ಕಛೇರಿಯ ಅಧಿಕೃತ ವೆಬ್ ಸೈಟ್. http://yadgir-va.kar.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: **08473-252703 ರಲ್ಲಿ ಕಛೇರಿ ಕೆಲಸದ ವೇಳೆಯಲ್ಲಿ** ಸಂಪರ್ಕಿಸಬಹುದು.

9. ಅಂತಿಮ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನ ನೇಮಕಾತಿ ಪ್ರಾಧಿಕಾರವು ಯುಕ್ತವೆಂದು ಭಾವಿಸುವ ಯಾವುದೇ ಹೆಚ್ಚುವರಿ ಷರತ್ತುಗಳನ್ನು ಯಾವುದೇ ಸಮಯದಲ್ಲಿ ಬೇಕಾದರೂ ವಿಧಿಸಬಹುದು ಹಾಗೂ ಹಾಲಿ ವಿಧಿಸಿರುವ ಯಾವುದೇ ಷರತ್ತುಗಳನ್ನು ಸಡಲಿಸುವ ಅಧಿಕಾರವನ್ನು ಕಾಯ್ದಿರಿಸಿಕೊಂಡಿರುತ್ತಾರೆ.

10. ಅರ್ಜಿದಾರರು ಅಂತಿಮವಾಗಿ ಯಶಸ್ವಿಯಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ, ವಿಧಿಸಲಾಗಿರುವ ಎಲ್ಲಾ ಷರತ್ತುಗಳನ್ನ ಅಭ್ಯಾರ್ಥಿ ಒಪ್ಪಿ ಅವುಗಳಿಗೆ ಬದ್ಧವಾಗಿರುವುದಾಗಿ ಭಾವಿಸಲಾಗುವುದು.

[ಡಾ|| ರಾಗಪ್ರಿಯಾ.ಆರ್. ಭಾ.ಆ.ಸೇ]
ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು ಯಾದಗಿರಿ

ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ ಬೆಂಗಳೂರು-560059 ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು ಯಾದಗಿರಿ ಇವರಿಗೆ ಒದಗಿಸಲು ಕೋರಲಾಗಿದೆ.

ಪ್ರತಿಯನ್ನು:-

1. ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಬೆಂಗಳೂರು
2. ಮಾನ್ಯ ಸರಕಾರದ ಪ್ರಧಾನ ಕಾರ್ಯದರ್ಶಿಗಳು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಹೈದ್ರಾಬಾದ-ಕರ್ನಾಟಕ ವಿಶೇಷ ಕೋಶ) ವಿಧಾನಸೌಧ ಬೆಂಗಳೂರು
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ [ಸೇವೆಗಳು] ಬಹುಮಹಡಿಗಳ ಕಟ್ಟಡ ಬೆಂಗಳೂರು.
4. ಮಾನ್ಯ ಪ್ರಾದೇಶಿಕ ಆಯುಕ್ತರು ಕಲಬುರಗಿ ವಿಭಾಗ ಕಲಬುರಗಿ
5. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6. ಸಹಾಯಕ ಆಯುಕ್ತರು ಯಾದಗಿರಿ ರವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7. ತಹಶೀಲ್ದಾರ್ ಯಾದಗಿರಿ/ಶಹಾಪೂರ/ಸುರಪುರ/ಗುರುಮಿಠಕಲ್/ವಡಗೇರಾ/ಹುಣಸಗಿ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು ಯಾದಗಿರಿ.
9. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಯಾದಗಿರಿ.
10. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ/ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.

ಅನುಬಂಧ–2

(ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ–ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

ಪ್ರಮಾಣ ಪತ್ರ

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................ ಜಿಲ್ಲೆಯ / ವಿಭಾಗದ ............................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................ ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

ಸಂವಿಧಾನ

ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988

ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ..........................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ............................................................ ಜಿಲ್ಲಾ/ವಿಭಾಗದ ......................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ........................................................

ತಹಶೀಲ್ದಾರ್.........................................

ಪದನಾಮ

ಕಛೇರಿಯ ಮೊಹರಿನೊಂದಿಗೆ

ಸ್ಥಳ :

ದಿನಾಂಕ:

ರಾಜ್ಯ /ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯನಿವಾಸಿಗಳು' ಎಂಬಪದಾವಳಿಯುಪ್ರಜಾಪ್ರಾತಿನಿಧ್ಯ ಅಧಿನಿಯಮ, 1950ರ 20ನೇಪ್ರಕರಣದಲ್ಲಿರುವ ಅರ್ಥವನ್ನೇಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

---

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ–ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

______________________________ ಶ್ರೀಮತಿ ______________________________ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀ / ಶ್ರೀಮತಿ ______________________________ ಇವರ ಮಗ / ಮಗಳು / ಪತ್ನಿ / ಪತಿಯಾದ ______________________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ______________________ ಜಾತಿಯ ________________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ :

ತಹಶೀಲ್ದಾರ್

________________ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

_______________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ _______________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ _______________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಮಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎಂಟು ಲಕ್ಷಮೀರುವುದಿಲ್ಲವೆಂದು;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ_______________ಇವರು _______________ ಜಾತಿಗೆ _______________ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ _______________ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ :

ದಿನಾಂಕ:

ತಹಶೀಲ್ದಾರ್

_______________ತಾಲ್ಲೂಕು

ಕಛೇರಿಯ ಮೊಹರು

ನಮೂನೆ-1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು

_______________ ತಾಲ್ಲೂಕು

_______________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ _______________ ಎಂಬುವವರ ಮಗ / ಮಗಳು / ಪತಿ / ಪತ್ನಿ _______________ ಆದ ನಾನು ಮೇಲುಸ್ತರದಲ್ಲಿ (ಅಡಿಜಚಿಟಥಿ ಐಚಿಥಿಜಡಿ) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :

   ತಾಲ್ಲೂಕು :

   ಜಿಲ್ಲೆ :

3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)

5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)

6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ:
ದಿನಾಂಕ:

ತಮ್ಮ ವಿಧೇಯ
(ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ಸ್ಥಳ:
ದಿನಾಂಕ:

ತಂದೆ/ತಾಯಿ/ಪೋಷಕರ ಸಹಿ
(ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ

1)

(ಪೂರ್ಣ ವಿಳಾಸದೊಂದಿಗೆ)

2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ______________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ______________ ಎಂಬುವವರು ಕರ್ನಾಟಕ ರಾಜ್ಯದ ________ ಜಿಲ್ಲೆಯ ವಿಭಾಗ ______________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ______________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (ಅಡಿಜಚಟಥಿ ಐಚಿಥಿಜಡಿ) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ:

ತಹಶೀಲ್ದಾರ್
__________ತಾಲ್ಲೂಕು
ಕಛೇರಿಯ ಮೊಹರು

| |
|---|
| ಸೂಚನೆ–1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯನಿವಾಸಿ' ಎಂಬಪದವು 1950ರ ಜನತಾಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ. |
| ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (ಅಡಿಜಚಟಥಿ ಐಚಿಥಿಜಡಿ) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು |

## ನಮೂನೆ-2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________________ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ______________ ಜಿಲ್ಲೆ ____________ ತಾಲ್ಲೂಕು__________ ಗ್ರಾಮದಲ್ಲಿ __________ ವಾಸವಾಗಿರುವ ಇವರು ಒಂದನೇ ತರಗತಿಯಿಂದ __________ ತರಗತಿಯವರೆಗೆ ____________ ಜಿಲ್ಲೆ ____________ ತಾಲ್ಲೂಕು_________ ಪಟ್ಟಣ________ ಶಾಲೆಯಲ್ಲಿ ವ್ಯಾಸಂಗ ಮಾಡಿ______ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು<br>
ಕ್ಷೇತ್ರ ಶಿಕ್ಷಣ ಅಧಿಕಾರಿ<br>
ಕಛೇರಿಯ ಮೊಹರು

ಸಹಿ<br>
ಮುಖ್ಯೋಪಾಧ್ಯಾಯರ ಸಹಿ<br>
ಮತ್ತು ಸಂಸ್ಥೆಯ ಮೊಹರು

ಸ್ಥಳ :<br>
ದಿನಾಂಕ:

---

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ________________ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ__________________ ಜಿಲ್ಲೆ ________________ತಾಲ್ಲೂಕು ______________ಗ್ರಾಮದಲ್ಲಿ ವಾಸವಾಗಿರುವ ಇವರು ________ನೇ ತರಗತಿಯಿಂದ __________ನೇ ತರಗತಿಯವರೆಗೆ __________ ಶೈಕ್ಷಣಿಕ ವರ್ಷದಿಂದ ________ ಶೈಕ್ಷಣಿಕ ವರ್ಷದವರೆಗೆ __________ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ:

ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

---

## ರಾಜ್ಯ ಹಾಗೂ ಕೇಂದ್ರ ಸರ್ಕಾರಿ ನೌಕರರು ಸಲ್ಲಿಸಬೇಕಾದ ನಿರಾಕ್ಷೇಪಣ ಪ್ರಮಾಣ ಪತ್ರ

ಶ್ರೀ/ಶ್ರೀಮತಿ.............................................................ಆದ ಇವರು ರಾಜ್ಯ/ಕೇಂದ್ರ ಸರ್ಕಾರದಲ್ಲಿ ..........................................(ಪದನಾಮ)..........................................ಇಲಾಖೆಯಲ್ಲಿ ಖಾಯಂ/ತಾತ್ಕಾಲಿಕ ಹುದ್ದೆಯನ್ನು ದಿನಾಂಕ:.............................. ರಿಂದ ..................................ರವರೆಗೆ ಹೊಂದಿರುವರು. ಇವರು . . . . . . . . . . . . . . ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡಿದೆ.

ದಿನಾಂಕ:

ಸ್ಥಳ: ನೇಮಕಾತಿ ಪ್ರಾಧಿಕಾರಿಯವರ ಸಹಿ ಮತ್ತು ಮೊಹರು

---

**GOVERNMENT OF KARNATAKA**
**DEPARTMENT OF SAINIK WELFARE AND RESETTLEMENT**
**Office of the Deputy Director Department of Sainik Welfare & Resettlement (Karnataka)**

**No.** **Date:**

### CERTIFICATE

This is to certify that Shri/Ssmt/Kum...................................................is an applicant for ..............................in Karnataka is the spouse/son/daughter of No.....................Rank...........

Name .......................................................who died/was permanently disabled while in service according to the certificate issued by Defense Authority. He died/was permanently disabled on ....................

Home address of the individual at the time of joining Defense Service as per the records is:

..................................................................

.....................................................................

Place: Signature of the Deputy Director
Date: Department of Sainik Welfare & Resettlement
District ...................................

ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005,
ದಿನಾಂಕ 19–11–2005

## CERTIFICATE FOR THE PERSONS WITH DISABILITIES

**This is to certify that Sri/Smt/Kum . . . . . . . . . . . . . . . . . . . . . . . . . . . . . . . . . . Son/Wife/Daughter of Shri . . . . . . . . . . . . . . . . . . . . . . . . . . . . . . . . . Age . . . . . . old, male/female, Registration No. . . . . . . . . . is a case of . . . . . . . . . . . . . . . . . . . . . . . . . . . . . . . . . .**

**He/She is physically disabled visual disabled speech & hearing disabled and has . . . . & . . . . . . percent) permanent (Physical impairment visual impairment speech & hearing impairment) in relation to his/her . . . . . . . . . . . . . .**

**Note:**

1. **This condition is progressive/non progressive likely to improve / not likely to improve.**
2. Re-assessment is not recommended / is recommended after a period of . . . . ...... months/years.

*Strike out which is not applicable.

| | | | |
|---|---|---|---|
| **Recent Photograph Showing the disability affixed here.** | **(Sd/-)<br>DOCTOR<br>(Seal)** | **(Sd/-)<br>DOCTOR<br>(Seal)** | **(Sd/-)<br>DOCTOR<br>(Seal)** |

**Countersigned by the**
**Medical Superintendent CMO/Head of Hospital**
**(with seal)**

**Signature/Thumb impression**
**Of the disabled person.**

**Place:**
**Date:**

-283

ANNEXURE-A

## ELIGIBILITY CERTIFICATE

[Under Article 371(J)]
(see rule 3(3))

[The Karnataka Public Employment (Reservation in Appointment for Hyderabad-Karnataka Region) Rules for Issual of Certificates, 2013]

Sri/Smt ........................ s/o/w/o ............................ is a Local Person of the Village/Town ......................... of Taluka ................................ of District ........................ of Karnataka State.

Place: ......................
Date : ......................

Name ....................................
Assistant Commissioner
............................ Sub Division
............................ District

**ANNEXURE-D**

**CERTIFICATE of HOME TOWN**
[Under Article 371(J)]
(see rule 4(e))

[The Karnataka Public Employment (Reservation in Appointment for Hyderabad-Karnataka Region) Rules for Issual of Certificates, 2013]

Sri/Smt ........................ s/o/w/o ............................ has declared ......................... Village/Town in ......................... Taluka of ............................ District of Karnataka State as his Home Town/Place in his Service Register.

I have personally verified the entry in the Service Register and satisfied myself that the above entry was in the Service Register since before 01.01.2013.

Place: ...................
Date : ...................

Name ....................................
Designation ............................
Office ................................
Department ............................